ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 jsscwk@gmail.com www. jsscwkgl.org

ಕೊಳ್ಳೇಗಾಲ 19.9.2025 ರಂದು ಇತಿಹಾಸ ವಿಭಾಗದ ವತಿಯಿಂದ **"ವೀರ ಮಹಿಳಾ ಹೋರಾಟಗಾರರು"** ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಡಾ.ವಿ.ಎಂ. ರಮೇಶ್, ಸಹ ಪ್ರಾಧ್ಯಾಪಕರು, ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಇವರು ಮಾತನಾಡುತ್ತಾ 17ನೇ ಶತಮಾನದ ರಾಣಿ ಅಬ್ಬಕ್ಕ, ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಝಾನ್ಸಿರಾಣಿ ಲಕ್ಷ್ಮಿಭಾಯಿ, ಕಮಲಾದೇವಿ, ಸಿದ್ಧಮ್ಮ ಹಾಗೂ ಸರೋಜಿನಿ ನಾಯ್ಡು ರವರು ಗಾಂಧಿಜಿಯರವರ ಜೊತೆ ಸೇರಿ ಸ್ವಾತಂತ್ರ್ಯ ಹೋರಾಟದಲ್ಲಿ ಪ್ರಮುಖ ಪಾತ್ರ ವಹಿಸಿದ್ದನ್ನು ಸ್ಮರಿಸಿಕೊಂಡರು. ಅಲ್ಲದೇ ನಮ್ಮ ಭಾರತದ ಸಂಸ್ಕೃತಿ–ಪರಂಪರೆಯನ್ನು ಉಳಿಸುವುದರಲ್ಲಿ ಮತ್ತು ಉತ್ತಮ ಶಿಕ್ಷಣ ನೀಡುವುದರಲ್ಲಿ ಜೆಎಸ್‌ಎಸ್ ವಿದ್ಯಾಸಂಸ್ಥೆಗಳ ಪಾತ್ರ ಬಹು ಮುಖ್ಯವಾದದ್ದು ಹಾಗೂ ಇಂತಹ ಉತ್ತಮ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವುದು ನಿವೇ ಭಾಗ್ಯವಂತರು ಎಂದು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ.ಹೆಚ್.ಎಸ್ ಕೊಂಗಳಪ್ಪನವರು ನಮ್ಮ ವೀರಮಹಿಳೆಯರು ದೇಶದ ಒಂದಲ್ಲ ಒಂದು ಭಾಗಗಳಲ್ಲಿ ಬ್ರಿಟೀಷರ ವಿರುದ್ಧ ಹೋರಾಟ ಮಾಡಿರುವುದು ಸ್ಫೂರ್ತಿದಾಯಕವಾಗಿದುದು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಇತಿಹಾಸ ವಿಭಾಗದ ಮುಖ್ಯಸ್ಥರಾದ ಕೆ.ಎಸ್ ಮಹೇಶ್‌ರವರು ವ್ಯಾಪಾರಕ್ಕೆಂದು ಬಂದು 300 ವರ್ಷಗಳ ಕಾಲ ಆಡಳಿತ ನಡೆಸಿದ ಬ್ರೀಟಿಷರ ವಿರುದ್ಧ ಮನೆ ಮಕ್ಕಳು ಸಂಸಾರದ ಜವಾಬ್ದಾರಿಯನ್ನು ಹೊಂದಿದ್ದ ಮಹಿಳೆಯೂ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿದ್ದು ಮಾತ್ರವಲ್ಲದೇ ದೇಶದ ನಿರ್ಮಾಣಾ ಹಾಗೂ ದೇಶದ ಅಭಿವೃದ್ಧಿಯಲ್ಲಿಯೂ ಅಮೋಘವಾದ ಕೊಡುಗೆ ನೀಡಿದ್ದಾರೆ ಎಂದರು.

ಡಾ.ವಿ.ಎಂ. ರಮೇಶ್, ಸಹ ಪ್ರಾಧ್ಯಾಪಕರು, ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಇವರು **"ವೀರ ಮಹಿಳಾ ಹೋರಾಟಗಾರರು"**ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸುತ್ತಿರುವುದು. ಚಿತ್ರದಲ್ಲಿ ಪ್ರಾರ್ಚಾರಾದ ಡಾ.ಹೆಚ್.ಎಸ್ ಕೊಂಗಳಪ್ಪರವರು, ಶ್ರೀ ಕೆ ಎಸ್ ಮಹೇಶ್, ಮುಖ್ಯಸ್ಥರು, ಇತಿಹಾಸ ವಿಭಾಗ,



ಡಾ.ವಿ.ಎಂ. ರಮೇಶ್, ಸಹ ಪ್ರಾಧ್ಯಾಪಕರು, ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಇವರು **"ವೀರ ಮಹಿಳಾ ಹೋರಾಟಗಾರರು"** ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡುತ್ತಿರುವುದು. ಚಿತ್ರದಲ್ಲಿ ಪ್ರಾರ್ಚಾರಾದ ಡಾ.ಹೆಚ್ ಎಸ್ ಕೊಂಗಳಪ್ಪ ರವರು, ಶ್ರೀ ಕೆ ಎಸ್ ಮಹೇಶ್, ಮುಖ್ಯಸ್ಥರು, ಇತಿಹಾಸ ವಿಭಾಗ,

